## ಕೃಷಿ ವಿಶ್ವ ವಿದ್ಯಾನಿಲಯ
## ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
ಜಿ.ಕೆ.ವಿ.ಕೆ., ಬೆಂಗಳೂರು–560065

*** ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ ***

**ದಿನಾಂಕ:** 23.08.2022

### ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಸೀಮಿತವಾಗಿದೆ

**ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)**

(ದಿನಾಂಕ **24-08-2022** ರಿಂದ **28-08-2022** ವರೆಗೆ)

| ನಿಯತಾಂಕಗಳು | 24.8.2022 | 25.8.2022 | 26.8.2022 | 27.8.2022 | 28.8.2022 |
|---|---|---|---|---|---|
| ಮಳೆ (ಮಿ ಮಿ) | 4 | 5 | 5 | 7 | 8 |
| ಗರಿಷ್ಠ ಉಷ್ಣಾಂಶ °(ಡಿ.ಸೆ. ) | 28 | 29 | 29 | 29 | 29 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 20 | 21 | 21 | 21 | 21 |
| ಮೋಡ (ಪ್ರಮಾಣ) | 8 | 8 | 8 | 8 | 8 |
| ಅರ್ದ್ರತೆ 7.20 ಬೆ (ಶೇ) | 88 | 88 | 88 | 92 | 93 |
| ಅರ್ದ್ರತೆ 2.20 ಮ (ಶೇ) | 86 | 86 | 86 | 88 | 88 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 11 | 11 | 10 | 10 | 12 |
| ಗಾಳಿಯ ದಿಕ್ಕು ( ಡಿಗ್ರಿ) | 292 | 292 | 297 | 292 | 292 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರ ಮಳೆಯಾಗುವ ಸಾದ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ **28.0-29.0°C** ಮತ್ತು ಕನಿಷ್ಠ **20.0-21.0°C** ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **88-93 %** ಇದ್ದು ಮಧ್ಯಾಹ್ನ **86-88 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **10-12** ಕಿ.ಮೀ. ವೇಗದಲ್ಲಿ ಬೀಸುವ ಸ೦ಭವವಿದೆ.

**"ಮಗೆ ಮಳೆ ಹುಯ್ದರೆ, ಬೆಳೆಯೆಲ್ಲಾ ಸಮೃದ್ಧ !"**

- ಮಗೆ ನಕ್ಷತ್ರದ ಮಳೆಯ ಕಾಲವು ಆಗಷ್ಟ್ ತಿಂಗಳ 17 ರಿಂದ ಆಗಷ್ಟ್ 30 ರ ವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 62.8 ಮಿ.ಮೀ. ವರೆಗೆ ಮಳೆಯಾಗುತ್ತದೆ.

**ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ**

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| ಸಾಮಾನ್ಯ ಸಲಹೆಗಳು | | 1. ಹಗುರ ಮಳೆಯ ಅವಕಾಶ ಇರುವುದರಿಂದ ತೇವಾಂಶದ ಆಧಾರದಲ್ಲಿ ಮುಂಗಾರು ಬಿತ್ತನೆಯನ್ನು ಮುಂದುವರಿಸಿ.<br>2. ಆಯಾ ವಲಯ ಪ್ರದೇಶಕ್ಕೆ ಶಿಫಾರಸ್ಸು ಮಾಡಿದ ತಳಿಗಳನ್ನೇ ಬಿತ್ತನೆಗೆ ಬಳಸುವುದು ಸೂಕ್ತ.<br>3. ಈಗಾಗಲೇ ಬಿತ್ತನೆಯಾಗಿರುವ ತೊಗರಿ ಮತ್ತು ಜೋಳದ ಬೆಳೆಗಳಲ್ಲಿ ಮೇಲು ಗೊಬ್ಬರವನ್ನು ಕೊಡಬೇಕು. |
| ಮುಂಗಾರು ಬೆಳೆಗಳು | ಬಿತ್ತನೆ, ಮೊಳಕೆ ಮತ್ತು ಬೆಳವಣಿಗೆ ಹಂತ | **ಎರಡುಬೆಳೆ ಪದ್ದತಿಯಲ್ಲಿ ಈ ಕೆಳಗಿನ ಮಧ್ಯಮಾವಧಿ ಮತ್ತು ಕಡಿಮೆ ಅವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>ಮೇ ತಿಂಗಳಲ್ಲಿ ಬಿತ್ತಿದ ಪೂರ್ವ ಮುಂಗಾರು ಬೆಳಗಳನ್ನು ಕಟಾವು ಮಾಡಿ ತಕ್ಷಣ ತಡವಾದ ಮುಂಗಾರು ಬೆಳೆಗಳಾದ ರಾಗಿ: ಕೆ.ಎಮ್,ಆರ್–301, ಇಂಡಾಫ್ 5,7 ಮತ್ತು 9, ಹಾಗು ಎಂ.ಎಲ್–365 ರಾಗಿ ತಳಿಗಳನ್ನು ಬಿತ್ತನೆ ಮಾಡಬಹುದು<br>ಅಲಸಂದೆ : ಟಿ.ವಿ.ಎಕ್ಸ್–944, ಕೆ.ಬಿ.ಸಿ–1, ಅವರೆ–ಎಚ್.ಎ–3 ಮತ್ತು 4,ಸೂರ್ಯಕಾಂತಿ: ಕೆ.ಬಿ.ಎಸ್.ಹೆಚ್–1,41,42,44 ಮತ್ತು 53, ಹುರುಳಿ: ಪಿ.ಎಚ್.ಜಿ–9 ಮತ್ತು ಕೆ.ಬಿ.ಎಚ್–1, ಹುಚ್ಚೆಳ್ಳು ತಳಿಗಳನ್ನು ಆಗಷ್ಟ್ ತಿಂಗಳ ಒಳಗಾಗಿ ಬಿತ್ತನೆ/ನಾಟಿ ಮಾಡುವುದು.<br>ಮುಸುಕಿನ ಜೋಳ: ಗಂಗಾ–11, ಡೆಕ್ಕನ್–103, ವಿಜಯ ಕಾಂಪೋಸಿಟ್, ಕಾಂಪೋಸಿಟ್ ಎನ್.ಎ.ಸಿ–6004,6002,<br>ನಿತ್ಯಶ್ರೀ–ಸಂಕರಣ ತಳಿ ಮತ್ತು ಹೇಮ –ಸಂಕರಣ ತಳಿ ಬಿತ್ತಲು ಸೂಚಿಸಲಾಗಿದೆ.<br>ಮೇಲಿನ ಮುಸುಕಿನ ಜೋಳ ತಳಿಗಳು ಕೇದಿಗೆ ರೋಗ, ಎಲೆ ಅಂಗಮಾರಿ ರೋಗ ಮತ್ತು ಕಾಂಡ ಕೊರೆಯುವ ಕೀಟ ನಿರೋಧಕ ಶಕ್ತಿ ಹೊಂದಿವೆ. |
| ಮಾವು | | 1. ಮಾವಿನಲ್ಲಿ ಒತ್ತಾಗಿ ಬೆಳೆದಿರುವ ರೆಂಬೆಗಳನ್ನು ಕತ್ತರಿಸಬೇಕು ಇದರಿಂದ ಸೂರ್ಯನ ಬೆಳಕು |

| | | |
|---|---|---|
| | | ಒಳಬಾಗಕ್ಕೆ ಬೀಳುತ್ತದೆ ಇದರಿಂದ ಒಳಭಾಗದಲ್ಲೂ ಮುಂದಿನ ಬಾರಿ ಹೂ ಮತ್ತು ಕಾಯಿ ಕಟ್ಟುತ್ತವೆ.<br>2. ಕಳೆ ನಿರ್ವಹಣೆಗೆ ಮತ್ತು ಭೂಮಿಯಲ್ಲಿನ ತೇವಾಂಶವನ್ನು ಸಂರಕ್ಷಿಸಲು ಅಂತರ ಬೇಸಾಯ ಮಾಡಬೇಕು. |
| **ರೇಷ್ಮೆ ಸಾಕಾಣಿಕೆ** | | 1. ರೇಷ್ಮೆ ಸಾಕಣೆ ಕೊಠಡಿಯ ಉಷ್ಣಾಂಶದ ಸ್ಥಿರತೆಯನ್ನು ಕಾಪಾಡಿಕೊಳ್ಳುವುದು. |
| **ಹೈನುಗಾರಿಕೆ** | | |
| | | |
| **ಪಶುಸಂಗೋಪನೆ** | | ➢ **ನೆರಡಿ ರೋಗ:** ಜ್ವರ, ಕೆಲವೊಮ್ಮೆ ಇದ್ದಕ್ಕಿದ್ದ ಹಾಗೆ ದನಗಳು ಸಾಯುವುದು, ಮೇವು ಬಿಡುವುದು, ಹೆಚ್ಚು ನಾಡಿ ಬಡಿತ, ಉಸಿರಾಟ, ಸಾವಿನ ಸಮಯದಲ್ಲಿ ಮೂಗು, ಬಾಯಿ ಮತ್ತು ಗುದದ್ವಾರದಿಂದ ರಕ್ತಸ್ರಾವವಾಗುತ್ತದೆ. ಇದರ ಹತೋಟಿಗೆ ಪ್ರತಿ ವರ್ಷ **ಜುಲೈ/ಆಗಸ್ಟ್** ತಿಂಗಳಲ್ಲಿ ಈ ರೋಗದ ಲಸಿಕೆಯನ್ನು ಕೊಡಿಸಿ ತಡೆಗಟ್ಟಬಹುದು.<br>➢ ಬಿಸಿಲು, ಮಳೆ ಮತ್ತು ಬೀಸು ಗಾಳಿಯನ್ನು ತಪ್ಪಿಸಲು ಕೋಳಿ ಮನೆಯನ್ನು ಪೂರ್ವ–ಪಶ್ಚಿಮಕ್ಕೆ ಉದ್ದುದ್ದವಾಗಿ ಆಯಾಕಾರವಾಗಿ ಕಟ್ಟುವುದು ಸೂಕ್ತ.<br>➢ ಸೂಕ್ತವಾದ ಹವಾಮಾನ ಮತ್ತು ಯತೇಚ್ಚ ಮೇವು ಸಿಗುವುದರಿಂದ ಹೈನುಗಾರಿಕೆ, ಹಂದಿ ಸಾಕಾಣಿಕೆ, ಕುರಿ ಮತ್ತು ಮೇಕೆ ಸಾಕಾಣಿಕೆಗೆ ಅನುವು ಮಾಡಿಕೊಡುತ್ತದೆ.<br>➢ ಹೈನುಗಾರಿಕೆಯಲ್ಲಿ ರೋಗಗಳ ನಿಯಂತ್ರಣಕ್ಕೆ ಪ್ರತಿ ವರ್ಷ ಲಸಿಕೆಯನ್ನು ಮಾಡಿಸುವುದು ಉತ್ತಮ.<br>➢ ಹಿಂಡಿ ಬೂಸವನ್ನು ಮೂರು–ನಾಲ್ಕು ಭಾಗ ಮಾಡಿ ಹಗಲಿನಲ್ಲಿ ಸಂಜೆ ಮತ್ತು ರಾತ್ರಿಯಲ್ಲಿ ತಿನ್ನಿಸುವುದು ಉತ್ತಮ.<br>1. ಹೆಚ್ಚು ಕರಾವು ಕೊಡುವ ರಾಸುಗಳ ಆಹಾರದಲ್ಲಿ ಕನಿಷ್ಠ ಶೇ. 17 ರಷ್ಟು ನಾರಿನ ಅಂಶವಿರಬೇಕು ( ಎನ್.ಡಿ.ಎಫ್. ಶೇ.22 ರಷ್ಟಿರಬೇಕು.) |

**ನೋಡಲ್ ಅಧಿಕಾರಿ:**
ಕೃಷಿ ಹವಾಮಾನ ವಿಭಾಗ
**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**

**ಮೊಬೈಲ್ ಆಪ್:**

- ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.